153 2 (103)
245

ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ., ಮಾನ್ಯ ವಿಧಾನ ಪರಿಷತ್ ಸದಸ್ಯರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ

*******

ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಹಾಗೂ ಕೊಡಗು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸತತ ಮಳೆಯಿಂದಾಗಿ ನದಿಗಳು ತುಂಬಿ ಹರಿಯುತ್ತಿದ್ದು, ಪ್ರವಾಹ ಪರಿಸ್ಥಿತಿ ಉಲ್ಬಣಗೊಂಡಿದೆ. ಬಹುತೇಕ ಕಡೆ ಸೇತುವೆಗಳ ಮೇಲೆಯೇ ನೀರು ಹರಿಯುತ್ತಿದ್ದು, ಹಲವು ರಸ್ತೆಗಳ ಸಂಪರ್ಕ ಸಂಪೂರ್ಣ ಕಡಿತಗೊಂಡಿದೆ. ಶೃಂಗೇರಿ-ಮಂಗಳೂರು ಸಂಪರ್ಕ ಈಗಾಗಲೇ ಕಡಿತಗೊಂಡಿದ್ದು, ಸೇತುವೆಗಳ ಮೇಲೆ ನೀರು ಹರಿಯುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಬಂದಾರು ಗ್ರಾಮದ ಕುಂಟಾಲಪಲ್ಕೆ, ಸೇತುವೆ ಬಳಿ ಕಲ್ಲಬ್ರಿ ಎಂಬಲ್ಲಿ ಭಾರಿ ಪ್ರಮಾಣದಲ್ಲಿ ಗುಡ್ಡ ಕುಸಿತ ಉಂಟಾಗಿದೆ. ಕುಕ್ಕೆ ಸುಬ್ರಮಣ್ಯದಲ್ಲಿ ಕುಮಾರಧಾರಾ ನದಿಯ ಪ್ರವಾಹದಿಂದಾಗಿ ಸ್ನಾನಘಟ್ಟ, ದರ್ಪಣತೀರ್ಥ ಸೇತುವೆ ಮುಳುಗಿವೆ. ಬೆಂಗಳೂರು-ಮಂಗಳೂರು ಹೆದ್ದಾರಿಯ ಶಿರಾಡಿ ಘಾಟ್ ರಸ್ತೆಯಲ್ಲಿ ಸಂಜೆ 6 ರಿಂದ ಬೆಳಿಗ್ಗೆ 6 ಗಂಟೆವರೆಗೆ ವಾಹನಗಳ ಸಂಚಾರವನ್ನು ಈಗಾಗಲೇ ನಿಷೇಧಿಸಲಾಗಿದೆ. ಅಂಕೋಲಾ ತಾಲ್ಲೂಕಿನ ಶಿರೂರಿನಲ್ಲಿ ಸಂಭವಿಸಿದ ಗುಡ್ಡ ಕುಸಿತದ ಭೀಕರ ದುರಂತದಲ್ಲಿ ಹಲವಾರು ಮಂದಿ ಸಾವನ್ನಪ್ಪಿದ್ದಾರೆ.

ರಾಜ್ಯದ ಕರಾವಳಿ ಸೇರಿದಂತೆ ಬಹುತೇಕ ಜಿಲ್ಲೆಗಳಲ್ಲಿ ಸತತ ಮಳೆ, ಗುಡ್ಡ ಕುಸಿತ ಹಾಗೂ ಭೀಕರ ಪ್ರವಾಹದಿಂದ ಹಲವಾರು ಸಾವು ನೋವುಗಳು ಸಂಭವಿಸಿದ್ದು, ಜನಜೀವನ ಸಂಪೂರ್ಣವಾಗಿ ಅಸ್ತವ್ಯಸ್ತವಾಗಿದ್ದು, ಜನರು ಅತ್ಯಂತ ಸಂಕಷ್ಟಕ್ಕೆ ಸಿಲುಕಿರುವ ಗಂಭೀರ ಪರಿಸ್ಥಿತಿ ಬಗ್ಗೆ:-

1. ರಾಜ್ಯದಲ್ಲಿ ಮುಂಗಾರು ಅವಧಿಯಲ್ಲಿ, ಜೂನ್ 1 ರಿಂದ 23.07.2024 ರವರೆವಿಗೂ ವಾಡಿಕೆಯಾಗಿ 401 ಮಿ.ಮೀ ಮಳೆಯಾಗಬೇಕಿದ್ದು, ವಾಸ್ತವಿಕವಾಗಿ 499 ಮಿ.ಮೀ ಮಳೆಯಾಗಿದ್ದು, ಶೇ.24ರಷ್ಟು ಅತ್ಯಧಿಕ ಮಳೆಯಾಗಿದೆ.
2. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಹಾಗೂ ಕೊಡಗು ಜಿಲ್ಲೆಗಳಲ್ಲಿ ದಿನಾಂಕ: ಜೂನ್ 01 ರಿಂದ 23/07/2024 ರವರೆವಿಗೂ 1691 ಮಿ.ಮೀ., ವಾಸ್ತವವಾಗಿ ಮಳೆಯಾಗಬೇಕಾಗಿದ್ದು, ವಾಸ್ತವಿಕವಾಗಿ 2077 ಮಿ.ಮೀ. ಮಳೆಯಾಗಿದ್ದು, ಶೇ.23ರಷ್ಟು ಹೆಚ್ಚು ಮಳೆಯಾಗಿರುತ್ತದೆ. ಮಲೆನಾಡು ಪ್ರದೇಶಗಳಲ್ಲಿ 808 ಮಿ.ಮೀ.

ಮಳೆಯಾಗಬೇಕಾಗಿದ್ದು, 922 ಮಿ.ಮೀ. ಮಳೆಯಾಗಿದ್ದು, ಶೇ.14 ರಷ್ಟು ಹೆಚ್ಚು ಮಳೆಯಾಗಿರುತ್ತದೆ.

3. ಚಿಕ್ಕಮಗಳೂರು, ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಕೊಡಗು, ಶಿವಮೊಗ್ಗ, ಮತ್ತು ಹಾಸನ ಜಿಲ್ಲೆಗಳಲ್ಲಿ ಭೂಕುಸಿತ ಸಂಭವಿಸಬಹುದಾದ 250 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಒಟ್ಟು 1351 ಗ್ರಾಮಗಳನ್ನು ಗುರುತಿಸಲಾಗಿದ್ದು, ಈ ಪ್ರದೇಶಗಳಲ್ಲಿ ಭೂ ಕುಸಿತಗಳನ್ನುತಡೆಗಟ್ಟಲು ಭಾರತ ಸರ್ಕಾರದ ಭೂ ವೈಜ್ಞಾನಿಕ ಸರ್ವೇಕ್ಷಣಾ ಸಂಸ್ಥೆ (Geological Survey of India) ಹಾಗೂ National Institute of Rock Mechanics (NIRM) ಸಹಯೋಗದೊಂದಿಗೆ ಉಪಶಮನ ಕ್ರಮಗಳನ್ನು ಕೈಗೊಳ್ಳಲಾಗುವುದು. ಭೂ ಕುಸಿತಗಳನ್ನು ತಡೆಯಲು ಕರಾವಳಿ ಮತ್ತು ಮಲೆನಾಡಿನ 7 ಜಿಲ್ಲೆಗಳಾದ ಚಿಕ್ಕಮಗಳೂರು, ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಕೊಡಗು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ಉಪಶಮನ ಕ್ರಮಗಳನ್ನು ಕೈಗೊಳ್ಳಲಾಗುವುದು.

4. ವಿಪತ್ತು ನಿರ್ವಹಣೆ ಕಾರ್ಯಪಡೆಗಳನ್ನು ರಚಿಸಲಾಗಿದ್ದು, ಭೂಕುಸಿತವಾಗುವಂತಹ ಅಪಾಯಕಾರಿ ಸ್ಥಳಗಳನ್ನು ಗುರುತಿಸಿ ಸದರಿ ಸ್ಥಳಗಳಲ್ಲಿನ ಮನೆಗಳನ್ನು ಸ್ಥಳಾಂತರಿಸುವುದು. ಹಾಗೂ ಅಪಾಯಕಾರಿ ರಸ್ತೆಗಳಲ್ಲಿನ ಓಡಾಟವನ್ನು ನಿಲ್ಲಿಸಲು ಕ್ರಮವಹಿಸಲಾಗುತ್ತದೆ.

5. ನೈಸರ್ಗಿಕ ವಿಕೋಪಗಳಿಂದ ಉಂಟಾದ ಹಾನಿಗೆ ನೀಡಬಹುದಾದ ಪರಿಹಾರದ ಬಗ್ಗೆ ಭಾರತ ಸರ್ಕಾರದ ಗೃಹ ಮಂತ್ರಾಲಯವು, ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ / ರಾಜ್ಯ ವಿಪತ್ತು ಪರಿಹಾರ ನಿಧಿಯ Revised Items and Norms of Assistance ಮಾರ್ಗಸೂಚಿಗಳನ್ನು ದಿನಾಂಕ:11.07.2023ರಂದು ಹೊರಡಿಸಿರುತ್ತದೆ. ಹಾಗಾಗಿ, ನೈಸರ್ಗಿಕ ವಿಕೋಪಗಳಿಂದ ಉಂಟಾದ ಹಾನಿಗೆ ಭಾರತ ಸರ್ಕಾರವು ನಿಗಧಿಪಡಿಸಿರುವ ದರಗಳಲ್ಲಿ ಮಾತ್ರ ಪರಿಹಾರವನ್ನು ರಾಜ್ಯ ವಿಪತ್ತು ಪರಿಹಾರ ನಿಧಿಯಡಿ ನೀಡಲು ಅವಕಾಶವಿರುತ್ತದೆ. ಅದರಂತೆ, ಪ್ರಕೃತಿ ವಿಕೋಪಗಳಿಂದ ಉಂಟಾದ ಹಾನಿಗೆ ಪರಿಹಾರ ಮೊತ್ತವನ್ನು ನಿಯಮಾನುಸಾರ ಅರ್ಹ ಫಲಾನುಭವಿಗಳ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ಲಭ್ಯವಿರುವ ಅನುದಾನದಿಂದ ಜಿಲ್ಲಾಧಿಕಾರಿಗಳ ಹಂತದಲ್ಲಿ ಪಾವತಿಸಲಾಗುತ್ತದೆ.

6. ಭಾರತ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ: 11.07.2023ರಂದು ಹೊರಡಿಸಿರುವ ಮಾರ್ಗಸೂಚಿಗಳಲ್ಲಿ ಪ್ರಕೃತಿ ವಿಕೋಪದಿಂದ ಮರಣ ಹೊಂದಿದ ವ್ಯಕ್ತಿಗಳ ಕುಟುಂಬದ ವಾರಸುದಾರರಿಗೆ EX-GRATIA ಮೊತ್ತವನ್ನು ನೀಡಲು, ಹಾನಿಗೊಳಗಾದ ಮನೆಗಳಿಗೆ